ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿಬಿಎಂಪಿ ಯಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಈಗಾಗಲೇ ಪಾವತಿ ಮಾಡಿರುವ ಬಿಲ್ಲುಗಳಲ್ಲಿ ತಡೆಹಿಡಿದಿರುವ ಶೇ.25% ರಷ್ಟು ಬಾಕಿ ಮೊತ್ತವನ್ನು ಬಿಡುಗಡೆ ಮಾಡಲು ಹಾಗೂ ಪಾವತಿಸಲು ಬಾಕಿಯಿರುವ ಕಾಮಗಾರಿ ಬಿಲ್ಲುಗಳನ್ನು ಶೇ.100 ರಷ್ಟು ಪಾವತಿ ಮಾಡುವ ಕುರಿತು.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2023, ದಿನಾಂಕ: 05-08-2023.
2) ಸರ್ಕಾರದ ಆದೇಶ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 13-09-2023
3) ಸರ್ಕಾರದ ಆದೇಶ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 01-12-2023 ಮತ್ತು ಸೇರ್ಪಡೆ ಆದೇಶ ದಿನಾಂಕ: 02-12-2023.
4) ಸರ್ಕಾರದ ಅಧಿಸೂಚನೆ ಸಂಖ್ಯೆ: ಒಇ 98 ಪಿಸಿಇ 2023, ದಿನಾಂಕ: 25-08-2023.
5) ಸರ್ಕಾರದ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2023, ದಿನಾಂಕ: 15-12-2023.
6) ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪ್ರಸ್ತಾವನೆ ಸಂಖ್ಯೆ: ಮುಆ/Work bill payment/ಪಿಆರ್/422/2024-25. ದಿನಾಂಕ: 01-06-2024.
7) ಸರ್ಕಾರದ ಪತ್ರ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 20-09-2024.
8) ಸದಸ್ಯ ಕಾರ್ಯದರ್ಶಿ, ಗೌರವಾನ್ವಿತ ಹೆಚ್.ಎನ್. ನಾಗಮೋಹನ್ ದಾಸ್ ವಿಚಾರಣಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ: ಗೌ.ನಾ.ವಿ.ಆ/ಹಿವಿತ-2/2024-25, ದಿನಾಂಕ: 30-09-2024.

* * * * *

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 05-08-2023ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ 2019-20 ರಿಂದ 2022-23 ರವರೆಗೆ ಪ್ರಮುಖವಾಗಿ ಘನತ್ಯಾಜ್ಯ ನಿರ್ವಹಣೆ ಕಾಮಗಾರಿಗಳು, ರಸ್ತೆ ಅಭಿವೃದ್ಧಿ, ಓಎಫ್‌ಸಿ ಕೇಬಲ್ ಅಳವಡಿಕೆ, ಬೃಹತ್ ನೀರುಗಾಲುವೆ ಕಾಮಗಾರಿಗಳು, ಕೇಂದ್ರ/ವಲಯ ನಗರ ಯೋಜನೆ ವಿಭಾಗಗಳಲ್ಲಿ ನಕ್ಷೆ ಮಂಜೂರಾತಿ / ಸ್ವಾಧೀನಾನುಭವ ಪತ್ರ ನೀಡುವಿಕೆ, ಕೆರೆಗಳ ಅಭಿವೃದ್ಧಿ ಕಾಮಗಾರಿಗಳು, ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿನ ಕಾಮಗಾರಿಗಳು ಮತ್ತು ವಾರ್ಡ್ ಮಟ್ಟದ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ವಿವರವಾದ ತನಿಖೆಯನ್ನು ನಡೆಸಲು 4 ವಿಶೇಷ ತನಿಖಾ ತಜ್ಞರ / ಪರಿಣಿತರ ನೇತೃತ್ವದಲ್ಲಿ 4 ಪ್ರತ್ಯೇಕ ತನಿಖಾ ಸಂಸ್ಥೆಗಳನ್ನು ರಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರ ಆದೇಶಗಳಲ್ಲಿ ತನಿಖಾ ವರದಿಗಳು ಬರುವ ವರೆಗೂ ಕಾಮಗಾರಿಗಳ ಬಿಲ್ ಪಾವತಿಯಲ್ಲಿ ಶೇ..75% ರಷ್ಟನ್ನು ಪಾವತಿಸಿ ಶೇ.25 ರಷ್ಟನ್ನು ತಡೆಹಿಡಿಯಲು ಆದೇಶಿಸಲಾಗಿರುತ್ತದೆ.

. . 2/-

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿಬಿಎಂಪಿ ಯಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಈಗಾಗಲೇ ಪಾವತಿ ಮಾಡಿರುವ ಬಿಲ್ಲುಗಳಲ್ಲಿ ತಡೆಹಿಡಿದಿರುವ ಶೇ.25% ರಷ್ಟು ಬಾಕಿ ಮೊತ್ತವನ್ನು ಬಿಡುಗಡೆ ಮಾಡಲು ಹಾಗೂ ಪಾವತಿಸಲು ಬಾಕಿಯಿರುವ ಕಾಮಗಾರಿ ಬಿಲ್ಲುಗಳನ್ನು ಶೇ.100 ರಷ್ಟು ಪಾವತಿ ಮಾಡುವ ಕುರಿತು.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2023, ದಿನಾಂಕ: 05-08-2023.
2) ಸರ್ಕಾರದ ಆದೇಶ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 13-09-2023
3) ಸರ್ಕಾರದ ಆದೇಶ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 01-12-2023 ಮತ್ತು ಸೇರ್ಪಡೆ ಆದೇಶ ದಿನಾಂಕ: 02-12-2023.
4) ಸರ್ಕಾರದ ಅಧಿಸೂಚನೆ ಸಂಖ್ಯೆ: ಒಇ 98 ಪಿಸಿಇ 2023, ದಿನಾಂಕ: 25-08-2023.
5) ಸರ್ಕಾರದ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2023, ದಿನಾಂಕ: 15-12-2023.
6) ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪ್ರಸ್ತಾವನೆ ಸಂಖ್ಯೆ: ಮುಆ/Work bill payment/ಪಿಆರ್/422/2024-25. ದಿನಾಂಕ: 01-06-2024.
7) ಸರ್ಕಾರದ ಪತ್ರ ಸಂಖ್ಯೆ: ನಅಇ 346 ಎಂಎನ್‌ವೈ 2023, ದಿನಾಂಕ: 20-09-2024.
8) ಸದಸ್ಯ ಕಾರ್ಯದರ್ಶಿ, ಗೌರವಾನ್ವಿತ ಹೆಚ್.ಎನ್. ನಾಗಮೋಹನ್ ದಾಸ್ ವಿಚಾರಣಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ: ಗೌ.ನಾ.ವಿ.ಆ/ಹಿವಿತ-2/2024-25, ದಿನಾಂಕ: 30-09-2024.

* * * * *

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ: 05-08-2023ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ 2019-20 ರಿಂದ 2022-23 ರವರೆಗೆ ಪ್ರಮುಖವಾಗಿ ಘನತ್ಯಾಜ್ಯ ನಿರ್ವಹಣೆ ಕಾಮಗಾರಿಗಳು, ರಸ್ತೆ ಅಭಿವೃದ್ಧಿ, ಓಎಫ್‌ಸಿ ಕೇಬಲ್ ಅಳವಡಿಕೆ, ಬೃಹತ್ ನೀರುಗಾಲುವೆ ಕಾಮಗಾರಿಗಳು, ಕೇಂದ್ರ/ವಲಯ ನಗರ ಯೋಜನೆ ವಿಭಾಗಗಳಲ್ಲಿ ನಕ್ಷೆ ಮಂಜೂರಾತಿ / ಸ್ವಾಧೀನಾನುಭವ ಪತ್ರ ನೀಡುವಿಕೆ, ಕೆರೆಗಳ ಅಭಿವೃದ್ಧಿ ಕಾಮಗಾರಿಗಳು, ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿನ ಕಾಮಗಾರಿಗಳು ಮತ್ತು ವಾರ್ಡ್ ಮಟ್ಟದ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ವಿವರವಾದ ತನಿಖೆಯನ್ನು ನಡೆಸಲು 4 ವಿಶೇಷ ತನಿಖಾ ತಜ್ಞರ / ಪರಿಣಿತರ ನೇತೃತ್ವದಲ್ಲಿ 4 ಪ್ರತ್ಯೇಕ ತನಿಖಾ ಸಂಸ್ಥೆಗಳನ್ನು ರಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರ ಆದೇಶಗಳಲ್ಲಿ ತನಿಖಾ ವರದಿಗಳು ಬರುವ ವರೆಗೂ ಕಾಮಗಾರಿಗಳ ಬಿಲ್ ಪಾವತಿಯಲ್ಲಿ ಶೇ..75% ರಷ್ಟನ್ನು ಪಾವತಿಸಿ ಶೇ.25 ರಷ್ಟನ್ನು ತಡೆಹಿಡಿಯಲು ಆದೇಶಿಸಲಾಗಿರುತ್ತದೆ.

. . 2/-

ಏತನ್ಮಧ್ಯೆ, ಒಳಾಡಳಿತ ಇಲಾಖೆಯ ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ: 25-08-2023ರ ಅಧಿಸೂಚನೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಾಮಗಾರಿಗಳನ್ನು ನಡೆಸುವ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಗಳಲ್ಲಿ ಟೆಂಡರ್ ಪ್ರಕ್ರಿಯೆ ಪ್ಯಾಕೇಜ್ ಪದ್ಧತಿ ಮಾನರ್ ಅಂದಾಜು (Revised Estimate) ಬಾಕಿ ಮೊತ್ತ ಬಿಡುಗಡೆ, ಇತ್ಯಾದಿ ವಿಷಯಗಳಲ್ಲಿ ನಡೆದಿದೆಯೆನ್ನಲಾದ ಭ್ರಷ್ಟಾಚಾರದ ಕುರಿತು ಸ್ಥಳ ಹಾಗೂ ದಾಖಲೆಗಳ ಪರಿಶೀಲನೆಯೊಂದಿಗೆ ವಿವರವಾದ ತನಿಖೆಯನ್ನು ನಡೆಸಿ, ಲೋಪದೋಷಗಳ ಮಾಹಿತಿ ಹಾಗೂ ತತ್ಸಂಬಂಧಿತ ಆರೋಪಿತರ ಸ್ಪಷ್ಟ ಗುರುತಿಸುವಿಕೆಯ ಸಹಿಯ ಪರಿಪೂರ್ಣ ತನಿಖೆ ನಡೆಸಲು ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ನೇತೃತ್ವದಲ್ಲಿ ತನಿಖಾ ಆಯೋಗವನ್ನು ರಚಿಸಿ ಆದೇಶಿಸಲಾಗಿರುತ್ತದೆ.

ಆದ್ದರಿಂದ, ನಗರಾಭಿವೃದ್ಧಿ ಇಲಾಖೆಯಿಂದ ರಚಿಸಲಾದ 4 ಹಿರಿಯ IAS ಅಧಿಕಾರಿಗಳ ನೇತೃತ್ವದ ತನಿಖಾ ಸಮಿತಿಗಳ ವಸ್ತು ವಿಷಯದ ವ್ಯಾಪ್ತಿ ಹಾಗೂ ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ನೇತೃತ್ವದಲ್ಲಿ ತನಿಖಾ ಆಯೋಗದ ವಸ್ತು ವಿಷಯದ ವ್ಯಾಪ್ತಿ ಒಂದೇ ಆಗಿದ್ದರಿಂದ ಮಾನ್ಯ ಉಚ್ಚ ನ್ಯಾಯಾಲಯವು ಈ ಕುರಿತು ಪರಿಶೀಲಿಸಿ ನಿಲುವು ತಿಳಿಸುವಂತೆ ಸೂಚಿಸಿದ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ: 15-12-2023ರ ಆದೇಶದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ರಚಿಸಲಾದ 4 ಹಿರಿಯ IAS ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲಾದ ತನಿಖಾ ಸಮಿತಿಗಳನ್ನು ಹಿಂಪಡೆದು, ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ನೇತೃತ್ವದಲ್ಲಿ ತನಿಖಾ ಆಯೋಗವು ಬಿಬಿಎಂಪಿ ಸೇರಿದಂತೆ ಎಲ್ಲಾ ಇಲಾಖೆಗಳ ತನಿಖೆಯನ್ನು ಮುಂದುವರೆಸಲಾಗಿರುತ್ತದೆ.

ಮುಖ್ಯ ಆಯುಕ್ತರು, ಬಿಬಿಎಂಪಿ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ದಿನಾಂಕ: 01-06-2024ರ ಪತ್ರದಲ್ಲಿ ದಿನಾಂಕ: 18-01-2024 ಮತ್ತು 07-05-2024 ರಂದು ಗುತ್ತಿಗೆದಾರರ ಸಂಘದವರು ಬಿಬಿಎಂಪಿಗೆ ತಮ್ಮ ಬೇಡಿಕೆಗಳನ್ನು ಈಡೇರಿಸಲು ಕೋರಿ ಮನವಿ ಸಲ್ಲಿಸಿರುತ್ತಾರೆ. ಈ ಸಂಬಂಧ ದಿನಾಂಕ: 07-05-2024ರಂದು ಸಂಘದ ಪದಾಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿ, ಚರ್ಚಿಸಿದಂತೆ ಈ ಕೆಳಕಂಡ ಪ್ರಮುಖ ಬೇಡಿಕೆಗಳನ್ನು ತುರ್ತಾಗಿ ಈಡೇರಿಸಲು ಒತ್ತಾಯಿಸಿರುತ್ತಾರೆ.

1. ಗೌರವಾನ್ವಿತ ನ್ಯಾಯಮೂರ್ತಿರವರ ಸಮಿತಿಯೊಳಗೆ ತನಿಖೆಗೆ ಒಳಪಟ್ಟಿರುವ ಸರ್ಕಾರದ ಬೇರೆ ಇಲಾಖೆಗಳಲ್ಲಿ ಕಾಮಗಾರಿ ಬಿಲ್ಲುಗಳ ಮೊತ್ತವನ್ನು ಶೇ.100ರಷ್ಟು ಪಾವತಿಸಿದ್ದು, ಆದರೆ, ಬಿಬಿಎಂಪಿಯಲ್ಲಿ ಮಾತ್ರ ಕಾಮಗಾರಿ ಬಿಲ್ಲುಗಳ ಮೊತ್ತ ಶೇ.75ರಷ್ಟನ್ನು ಪಾವತಿಸಲಾಗುತ್ತಿದೆ. ಸರ್ಕಾರದ ಬೇರೆ ಇಲಾಖೆಗಳ ರೀತಿಯಲ್ಲಿಯೇ ಕಾಮಗಾರಿ ಬಿಲ್ಲುಗಳ ಮೊತ್ತವನ್ನು ಶೇ.100ರಷ್ಟು ಪಾವತಿಸಲು ಕ್ರಮವಹಿಸುವಂತೆ ಕೋರಿದರು.

2. ಏಪ್ರಿಲ್ -2021 ರಿಂದ ಇಲ್ಲಿಯವರೆಬಿಗೂ ಪಾವತಿಸಬೇಕಾದ ಎಲ್ಲಾ ಕಾಮಗಾರಿ ಬಿಲ್ಲುಗಳಲ್ಲಿ ಶೇ.25ರಷ್ಟು ಹಣವನ್ನು ತಡೆಹಿಡಿದ್ದು, ಶೇ.75ರಷ್ಟು ಹಣವನ್ನು ಮಾತ್ರ ಪಾವತಿ ಮಾಡಲಾಗುತ್ತಿರುತ್ತದೆ. ಬಿಲ್ ಸಲ್ಲಿಸಿ 3 ವರ್ಷಗಳಾದರೂ ಸಹ ಬಿಲ್ಲಿನ ಸಂಪೂರ್ಣ ಹಣ ಗುತ್ತಿಗೆದಾರರಿಗೆ ಪಾವತಿಯಾಗುತ್ತಿರುವುದಿಲ್ಲ. ಆದ ಕಾರಣ ತಡೆಹಿಡಿಯಲಾಗಿರುವ ಬಾಕಿ ಶೇ.25ರಷ್ಟು ಹಣವನ್ನು ಬಿಡುಗಡೆ ಮಾಡುವಂತೆ ಕೋರಿದರು.

. . 3/-

ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ ಈ ಹಂತದಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಕಾಮಗಾರಿಗಳ ಲೋಪದೋಷವನ್ನು ಸಂಬಂಧಪಟ್ಟ ಅಧಿಕಾರಿಗಳು ಯಾರು ಗುತ್ತಿಗೆದಾರರು ಯಾರು ಮತ್ತು ಆರ್ಥಿಕ ಹೊರೆ ಏನೂ ಎಂಬುದನ್ನು ಸ್ಪಷ್ಟವಾಗಿ ತಿಳಿಯಪಡಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಶೇ. 25 ರಷ್ಟು ಗುತ್ತಿಗೆದಾರರ ತಡೆಹಿಡಿದಿರುವ ಬಿಲ್ಲುಗಳನ್ನು ಸೂಕ್ತ ಬ್ಯಾಂಕ್ ಗ್ಯಾರಂಟಿಯನ್ನು ಪಡೆದು ನೀಡಬಹುದಾಗಿದೆ.

ಬಿಬಿಎಂಪಿ ಯ ಕೆಲವು ಗುತ್ತಿಗೆದಾರರು ತಾವು ನಿರ್ವಹಿಸಿದ ಕಾಮಗಾರಿಗಳ ಬಿಲ್ಲುಗಳನ್ನು ವಿನಾಕಾರಣ ತಡೆಹಿಡಿಯಲಾಗಿದೆ ಎಂದು ಕರ್ನಾಟಕ ಹೈಕೋರ್ಟ್‌ನಲ್ಲಿ ಘಕ 27053/2023 ಪ್ರಕರಣವನ್ನು ದಾಖಲಿಸಿ ಬಾಕಿ ಬಿಲ್ಲುಗಳನ್ನು ಪಾವತಿಸಬೇಕೆಂದು ಕೋರಿರುತ್ತಾರೆ. ನ್ಯಾಯಲಯದ ಮುಂದೆ ದಿನಾಂಕ 13.02.2024 ರಂದು ಅಡ್ವಕೇಟ್ ಜನರಲ್ ರವರು ಹಾಜರಾಗಿ ಈ ಕೆಳಕಂಡಂತೆ ಹೇಳಿಕೆಯನ್ನು ನೀಡಿರುತ್ತಾರೆ.

The learned advocate general would further submit that the continuation of the enquiry before the commission has nothing to do, for any payment to be made interms of the order Dated 13.12.2023.

ಮೇಲೆ ತಿಳಿಯಪಡಿಸಿದಂತೆ ಸರ್ಕಾರವು ಗುತ್ತಿಗೆದಾರರಿಗೆ ಬಾಕಿ ಇರುವ ಶೇ.25 ರಷ್ಟು ಬಿಲ್ಲುಗಳನ್ನು ಬ್ಯಾಂಕ್ ಗ್ಯಾರೆಂಟಿ ಪಡೆದು ಪಾವತಿಸಿಬಹುದಾಗಿದೆ ಎಂಬ ವಿಷಯದಲ್ಲಿ ಸರ್ಕಾರ ತನ್ನ ವಿವೇಚನೆಯಂತೆ ತಿರ್ಮಾನಿಸುವುದು.

ಈ ಬಗ್ಗೆ ಪರಿಶೀಲಿಸಿ, ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರ ನೇತೃತ್ವದ ಆಯೋಗಕ್ಕೆ ಒಳಪಟ್ಟಿರುವ ಸರ್ಕಾರದ ಇತರೆ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇತರೆ ಮಹಾನಗರ ಪಾಲಿಕೆಗಳು ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿಯೂ ಕಾಮಗಾರಿಗಳ ಬಿಲ್‌ಗಳ ಮೊತ್ತವನ್ನು ಶೇ.100 ರಷ್ಟು ಪಾವತಿಸುತ್ತಿರುವುದು ಗಮನಕ್ಕೆ ಬಂದಿದ್ದು ಹಾಗೂ ರಾಜ್ಯದ ಎಲ್ಲಾ ಇಲಾಖೆಗಳ ಬಿಲ್ ಪಾವತಿಯಲ್ಲಿ ಏಕರೂಪತೆ ಕಾಯ್ದುಕೊಳ್ಳಬೇಕಾಗಿರುವುದರಿಂದ ದಿನಾಂಕ: 01-06-2024ರ ಪತ್ರದಲ್ಲಿ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುವಂತೆ ಹಾಗೂ ಮಾನ್ಯ ಆಯೋಗದ ಅಭಿಪ್ರಾಯದನುಸಾರ ಗುತ್ತಿಗೆದಾರರಿಗೆ ಈಗಾಗಲೇ ಪಾವತಿ ಮಾಡಿರುವ ಬಿಲ್ಲುಗಳಲ್ಲಿ ತಡೆಹಿಡಿದಿರುವ ಶೇ.25% ರಷ್ಟು ಬಾಕಿ ಮೊತ್ತವನ್ನು ಬಿಡುಗಡೆ ಮಾಡಲು ಹಾಗೂ ಪಾವತಿಸಲು ಬಾಕಿಯಿರುವ ಕಾಮಗಾರಿ ಬಿಲ್ಲುಗಳನ್ನು ಶೇ.100 ರಷ್ಟು ಪಾವತಿ ಮಾಡುವ ಸಂಬಂಧ ಈ ಕೆಳಕಂಡಂತೆ ತೀರ್ಮಾನಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 346 ಎಂಎನ್‌ವೈ 2023
ಬೆಂಗಳೂರು, ದಿನಾಂಕ: 04-11-2024

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮುಖ್ಯ ಆಯುಕ್ತರು ಬಿಬಿಎಂಪಿ ಇವರ ದಿನಾಂಕ: 01-06-2024ರ ಪ್ರಸ್ತಾವನೆಯನ್ನು ಪರಿಗಣಿಸಿ, ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ವಿಚಾರಣಾ ಆಯೋಗದ ಅಂತಿಮ ವರದಿಯ ತೀರ್ಮಾನಕ್ಕೆ ಒಳಪಟ್ಟು, ಗುತ್ತಿಗೆದಾರರಿಗೆ ಈಗಾಗಲೇ ಪಾವತಿ ಮಾಡಿರುವ ಬಿಲ್ಲುಗಳಲ್ಲಿ ತಡೆಹಿಡಿದಿರುವ ಶೇ.25% ರಷ್ಟು ಬಾಕಿ ಮೊತ್ತವನ್ನು ಪಾವತಿಸಲು ಹಾಗೂ ಪಾವತಿಸಲು ಬಾಕಿಯಿರುವ ಕಾಮಗಾರಿ ಬಿಲ್ಲುಗಳಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು ಶೇ.100 ರಷ್ಟು ಪಾವತಿಸುವಂತೆ ಆದೇಶಿಸಿದೆ.

ಸ.ಸ. 5/-

1. Besides 5% of the cost of the work (performance guarantee) which is already taken by BBMP another 5% of the cost of work shall be kept as further security against any defect found by the Justice Nagmohan Das Committee either in the form of additional bank guarantee or withholding of equivalent amount in the bill and remaining of the 25% of the bill amount may be paid.

2. In any case where the original 5% performance guarantee has been returned the money shall be withheld to an amount of 10% of the work cost or a bank guarantee of the same amount.

3. In short the BBMP shall keep a total of 10% of the work cost as security deposit either in the form of Bank guarantee or in the form of partial money deposit and partial bank guarantee.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಕ್ಷ್ಮೀಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ-1).

ಇವರಿಗೆ:

1) ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ವಿಚಾರಣಾ ಆಯೋಗ, 3ನೇ ಮಹಡಿ, ಲೋಕೋಪಯೋಗಿ ಇಲಾಖೆ ಮುಖ್ಯ ಕಟ್ಟಡ, ಕೆ.ಆರ್. ವೃತ್ತ, ಬೆಂಗಳೂರು-560 001.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6) ಮಾನ್ಯ ಉಪ ಮುಖ್ಯಮಂತ್ರಿಗಳು, ಬೆಂಗಳೂರು ನಗರಾಭಿವೃದ್ಧಿ ಮತ್ತು ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.